O.S.No.198/2020
PW -3

ದಿನಾಂಕ 22/06/2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯ್ತು

**ಪಾಟೀ ಸವಾಲು :- ಶ್ರೀ ಡಿ.ವಿ.ಎಸ್. ಪ್ರತಿವಾದಿ ಪರ ವಕೀಲರಿಂದ**

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಬರೆದ ವಿಚಾರಗಳ ಬಗ್ಗೆ ನನಗೆ ಗೊತ್ತಿರುವುದಿಲ್ಲ. ನನಗೆ ಈ ದಾವೆ ಬಗ್ಗೆ ಗೊತ್ತಿರುವುದಿಲ್ಲ ಎಂದರೆ ಸರಿ. ಊರಿನವರು ಬಾ ಸಹಿ ಹಾಕು ಎಂದು ಹೇಳಿದ ಕಾರಣ ನಾನು ಸಹಿ ಮಾಡಿರುತ್ತೇನೆ. ಸದರಿ ಪಂಚಾಯಿತಿಯಲ್ಲಿ ಏನು ಏನು ಆಗಿರುತ್ತದೆ ಎಂದು ನನಗೆ ಗೊತ್ತಿರುವುದಿಲ್ಲ. ಈ ದಾವೆಯನ್ನು ರಂಗಪ್ಪ ಮತ್ತು ಆಂಜನಪ್ಪನ ಮೇಲೆ ಹೂಡಿರುತ್ತಾರೆ. ದಾವಾ ಆಸ್ತಿಯ ಸರ್ವೆ ನಂಬರ್ ಮತ್ತು ಚಕ್ಕುಬಂದಿ ನನಗೆ ಗೊತ್ತಿರುವುದಿಲ್ಲ. ಸರ್ವೆ ನಂ- 212 ಮತ್ತು 213 ರ ಆಸ್ತಿ ರಂಗಪ್ಪ ಮತ್ತು ಆಂನಜಪ್ಪ ಇವರಿಗೆ ಸೇರಿರುತ್ತದೆ. ಸದರಿ ಆಸ್ತಿಯ ಪಹಣಿ ನಾನು ನೋಡಿರುವುದಿಲ್ಲ. ದಾವಾ ಆಸ್ತಿಯ ಅಕ್ಕ ಪಕ್ಕ ನನಗೆ ಸೇರಿದ ಜಮೀನು ಇರುವುದಿಲ್ಲ. ದಾರಿ ಆಂಜಿನಪ್ಪ ಮತ್ತು ರಂಗಪ್ಪ ರವರ ಜಮೀನಿನಲ್ಲಿ ಇದೆ ಎಂದು ಹೇಳಿರುವುದನ್ನು ನಾನು ಕೇಳಿರುತ್ತೇನೆ, ಆ ಬಗ್ಗೆ ದಾಖಲೆಗಳನ್ನು ನೋಡಿರುವುಲ್ಲ. ನನಗೆ ಈ ದಾವೆ ಬಗ್ಗೆ ಏನು ಗೊತ್ತಿರುವುದಿಲ್ಲ. ವಾದಿಗಳ ಮಾತುಕೇಳಿಕೊಂಡು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಈ ದಾವೆ ಯಾವ ಕಾರಣಕ್ಕಾಗಿ ಹೂಡಿರುತ್ತಾರೆಂದು ನನಗೆ ಗೊತ್ತಿರುವುದಿಲ್ಲ. ಸಾಕ್ಷಿ ಮುಂದುವರೆದು ದಾರಿ ಬೇಕು ಎಂದು ಹಾಕಿರುತ್ತಾರೆಂದು ಉತ್ತರಿಸಿರುತ್ತಾರೆ.

**ಮರು ವಿಚಾರಣೆ ಇಲ್ಲ.**

(ತೆ ನ್ಯಾ ನ ಉ ಲೇ ಬೆ ಮಾ )

ಓ ಹೇ ಕೇ ಸ ಇ ಎ ಒ

( ರಘುನಾಥ ಗೌಡ ಕೆ.ಟಿ. )
ಪ್ರಧಾನ ಸಿವಿಲ್ ಜಡ್ಜ್, ಮಧುಗಿರಿ